ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 31/5/202

# ತನಿಖೆಗೆ ತಡೆ ಒಡ್ಡಿಲ್ಲ

31/5/20



ಸಂ.ಕ. ಸಮಾಚಾರ, ಬೆಂಗಳೂರು

ಕೊರೊನಾ ಸೋಂಕು ತಡೆಗೆ ಸಂಬಂಧಿಸಿದ ವೈದ್ಯಕೀಯ ಪರಿಕರದ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ತನಿಖೆಗೆ ಯಾವುದೇ ರೀತಿಯಲ್ಲೂ ತಡೆಯೊಡ್ಡಿಲ್ಲ ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸ್ಪಷ್ಟಪಡಿಸಿದ್ದಾರೆ.

**ಕಾಗೇರಿ ಸ್ಪಷ್ಟನೆ**

ಮಾಜಿ ಸಚಿವ ಎಚ್.ಕೆ.ಪಾಟೀಲ್ ನೇತೃತ್ವದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಅವ್ಯವಹಾರಗಳ ತನಿಖೆ ನಡೆಸಲು ಸಜ್ಜಾಗಿತ್ತು. ಆದರೆ ಈ ಸಂದರ್ಭದಲ್ಲಿ ಕಾಗೇರಿ ಸಭೆ ನಡೆಸಲು ಅನುಮತಿ ನಿರಾಕರಿಸಿದ್ದರು. ಈ ಕಾರಣದಿಂದ ಸಭಾಧ್ಯಕ್ಷರ ವಿರುದ್ಧ ಹಕ್ಕುಚ್ಯುತಿ ಮಂಡನೆ ಮಾಡಲು ಕಾಂಗ್ರೆಸ್ ನಿರ್ಧರಿಸಿತ್ತು.

ಈ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿರುವ ಸಭಾಧ್ಯಕ್ಷರು, ಕೊರೊನಾ ಸೋಂಕು ವ್ಯಾಪಕವಾಗಿ ಹರಡಿದ್ದ ಸಮಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಾರ್ಗಸೂಚಿಯಂತೆ ನಡೆದುಕೊಳ್ಳಲಾಗಿದೆ. ಇದರಲ್ಲಿ ಯಾವುದೇ ದುರುದ್ದೇಶವಿರಲಿಲ್ಲ ಮತ್ತು ರಾಜ್ಯದಲ್ಲಿ ಲಾಕ್‌ಡೌನ್ ಅನ್ನು ಹಂತ ಹಂತವಾಗಿ ಸಡಿಲಗೊಳಿಸಿದ್ದರಿಂದ ಇದೇ ತಿಂಗಳ 18 ರಂದು ಸಮಿತಿಗಳಿಗೆ ಸಭೆ ನಡೆಸಲು ಅವಕಾಶ ನೀಡಲಾಗಿತ್ತು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದೇ ವಿಚಾರವಾಗಿ ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಹಿರಿಯ ನಾಯಕ ಹೆಚ್.ಕೆ.ಪಾಟೀಲ್ ಅವರ ನೇತೃತ್ವದಲ್ಲಿ ವಿಕಾಸಸೌಧದ ಬಳಿ ಇರುವ ಗಾಂಧಿ ಪ್ರತಿಮೆ ಬಳಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗಿತ್ತು. ಸಾರ್ವಜನಿಕ ಲೆಕ್ಕಪತ್ರ ಸಮಿತಿ ಪರಿಶಿಲನೆಗೆ ಅನುಮತಿ ನೀಡದೆ ಸರ್ಕಾರ ಪ್ರಜಾಪ್ರಭುತ್ವಕ್ಕೆ ದ್ರೋಹ ಎಸಗುತ್ತಿದೆ. ಕೊರೊನಾ ಸೋಂಕಿನ ನೆಪದಲ್ಲಿ ನಡೆಸಲಾಗುತ್ತಿರುವ ಸರ್ಕಾರದ ಭ್ರಷ್ಟಾಚಾರಕ್ಕೆ ಸ್ವತ: ಸ್ಪೀಕರ್ ಅವರೇ ಕುಮ್ಮಕ್ಕು ನೀಡಿದ್ದಾರೆಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದನ್ನು ಇಲ್ಲಿ ಸ್ಮರಿಸಬಹುದು.